**ಕರ್ನಾಟಕ ಸರ್ಕಾರ**

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ತರೀಕೆರೆ.**

**ಸಿ.ಸಿ.ನಂ.685/2014**

ಪಿ.ಡಬ್ಲ್ಯೂ: 18

ಸಿ.ಡಬ್ಲ್ಯೂ: 13

| | | |
|---|---|---|
| ಸಾಕ್ಷಿದಾರರ ಹೆಸರು | : | ಅನಿಲ್ ಕುಮಾರ್ |
| ತಂದೆಯ ಹೆಸರು | : | ನಾರಾಯಣ ಗೌಡ |
| ವಯಸ್ಸು | : | 47 ವರ್ಷ |
| ಉದ್ಯೋಗ | : | ವ್ಯವಸಾಯ |
| ವಾಸಸ್ಥಳ | : | ಬಾವಿಕೆರೆ |

**ದಿನಾಂಕ: 10-07-2023 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು**

**ಮುಖ್ಯ ವಿಚಾರಣೆ : ಸಹಾಯಕ ಸರ್ಕಾರಿ ಅಭಿಯೋಜಕರವರಿಂದ**

ಈಗ್ಗೆ ಸುಮಾರು 3-4 ವರ್ಷಗಳ ಹಿಂದೆ ನಾನು ತರೀಕೆರೆಯಿಂದ ಬಾವಿಕೆರೆಯಲ್ಲಿರುವ ನನ್ನ ಮನೆಗೆ ಹೋಗುತ್ತಿರುವಾಗ ಬಾವಿಕೆರೆ ಕೋರೆ ರಸ್ತೆ ಪಕ್ಕದಲ್ಲಿ ಬೆಳಿಗ್ಗೆ 11-00 ಗಂಟೆ ಸಮಯದಲ್ಲಿ ಪೊಲೀಸರ ಕೋರಿಕೆಯ ಮೇರೆಗೆ ಒಂದು ದಾಖಲಾತಿಗೆ ಸಹಿ ಮಾಡಿದ್ದು, ಸದರಿ ದಾಖಲೆಯಲ್ಲಿ ಬರೆದಿರುವ ವಿಚಾರಗಳು ನನಗೆ ಗೊತ್ತಿರುವುದಿಲ್ಲ. ನನ್ನ ಸಮಕ್ಷಮದಲ್ಲಿ ಪೊಲೀಸರು ಯಾವುದೇ ದಾಖಲಾತಿಗಳನ್ನು ಅಮಾನತ್ತುಪಡಿಸಿಕೊಂಡಿರುವುದಿಲ್ಲ.

ಸಾಕ್ಷಿಗೆ ಮತ್ತೊಂದು ದಾಖಲಾತಿಯನ್ನು ತೋರಿಸಲಾಗಿದ್ದು, ಅದು ಅಮಾನತ್ತು ಮಹಜರ್ ಆಗಿದ್ದು, ಸದರಿ ದಾಖಲೆಯನ್ನು ಈಗಾಗಲೇ ನಿಪಿ-5 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ-5(ಬಿ) ಎಂದು ಗುರುತಿಸಲಾಯಿತು.

*(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು.)*

**ಪಾಟೀ ಸವಾಲು: ಸಹಾಯಕ ಸರ್ಕಾರಿ ಅಭಿಯೋಜಕರವರಿಂದ**

ದಿ: 26-03-2014 ರಂದು ಬೆಳಿಗ್ಗೆ 11-00 ಗಂಟೆಯಿಂದ 12-10 ರವರೆಗೆ ಲಕ್ಕವಳ್ಳಿ ಪೊಲೀಸ್ ಠಾಣೆಯಲ್ಲಿ ಮಹಜರ್ ಮಾಡಿದ್ದು, ಸದರಿ ಮಹಜರಿಗೆ ನಾನು ಸಹಿ ಹಾಕಿರುತ್ತೇನೆಂದರೆ ಸರಿಯಲ್ಲ. ಪೊಲೀಸರು ನನ್ನ ಸಮಕ್ಷಮದಲ್ಲಿ ಅಸಸ್ ಮೆಂಟ್ ಪುಸ್ತಕದ ಪುಟ ಸಂಖ್ಯೆ 295 ರಿಂದ 488 ನ್ನು

ಅಮಾನತ್ತುಪಡಿಸಿಕೊಂಡಿರುತ್ತಾರೆಂದರೆ ಸರಿಯಲ್ಲ ಮತ್ತು ಅದೇ ಸಮಯದಲ್ಲಿ ದಿಃ ***22-11-2010*** ರ ಒಂದು ಸಭಾ ನಡವಳಿಕೆ ಪುಸ್ತಕದ ಪುಟ ಸಂಖ್ಯೆ ***1*** ರಿಂದ ***98*** ಪುಟಗಳಿರುವ ಪುಸ್ತಕವನ್ನು ಅಮಾನತ್ತುಪಡಿಸಿಕೊಂಡಿರುತ್ತಾರೆಂದರೆ ಸರಿಯಲ್ಲ. ದಿಃ ***03-10-2013*** ರ ಒಂದು ಸಭಾ ನಡವಳಿಕೆ ಪುಸ್ತಕದ ಪುಟ ಸಂಖ್ಯೆ ***1*** ರಿಂದ ***98*** ಪುಟಗಳಿರುವ ಪುಸ್ತಕವನ್ನು ಪೊಲೀಸರು ನನ್ನ ಸಮಕ್ಷಮ ಅಮಾನತ್ತುಪಡಿಸಿಕೊಂಡಿರುತ್ತಾರೆಂದರೆ ಸರಿಯಲ್ಲ.

***ಪಾಟೀ ಸವಾಲು ಃ ಆರೋಪಿ ಪರ ವಕೀಲರಿಂದ.***

ಪಾಟೀ ಸವಾಲು ಇಲ್ಲ

**ಮರುವಿಚಾರಣೆಃ ಇರುವುದಿಲ್ಲ.**

*(ತೆರೆದ ನ್ಯಾಯಾಲಯದಲ್ಲಿ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು.)*

*ಓ. ಕೇ. ಸ. ಇ. ಎ. ಒ.*

Sd/-

*ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು*

***ಪ್ರ.ದ.ನ್ಯಾ.ದಂ.ರವರು,ತರೀಕೆರೆ.***